**CC 153/2017**

**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಗಳ ನ್ಯಾಯಾಲಯ, ಹೊಸಪೇಟೆ.**

**ಸಿಸಿ ನಂಬರ್ 153/2017**

**ಸಿ ಡಬ್ಲ್ಯೂ - 6**
**ಪಿ ಡಬ್ಲ್ಯೂ - 4**

| | |
|---|---|
| **ಸಾಕ್ಷಿಯ ಹೆಸರು -** | **ಲಕ್ಷ್ಮೀ** |
| **ತಂದೆಯ ಹೆಸರು -** | **ಹುಲುಗಪ್ಪ** |
| **ವಯಸ್ಸು -** | **25 ವರ್ಷಗಳು** |
| **ಉದ್ಯೋಗ -** | **ಖಾಸಗಿ ಕೆಲಸ** |
| **ವಾಸಸ್ಥಳ -** | **ಹೊಸಪೇಟೆ** |

**ಸಾಕ್ಷಿಯನ್ನು ದಿನಾಂಕಃ 20-02-2025 ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಪೋಲಿಸರಿಗೆ ಯಾವುದೇ ಹೇಳಿಕೆ ನೀಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ**

ದಿಃ 19-03-2016 ರಂದು ಚಾಸಾ -1 ರವರು ಆರೋಪಿಯ ಕ್ಲಿನಿಕ್ ಗೆ ಚಾಸಾ -4 ರವರೊಂದಿಗೆ ಚಿಕಿತ್ಸೆ ಪಡೆಯಲು ಬಂದಿದ್ದರು ಅಂದರೆ ಸರಿಯಲ್ಲ. ದಿಃ 06-05-2016 ರಂದು ಆರೋಪಿ ಚಾಸಾ -1 ರವರಿಗೆ ರೂಟ್ ಕೆನಾಲ್ ಚಿಕಿತ್ಸೆ ಮಾಡುವ ಸಂದರ್ಭದಲ್ಲಿ ನಿರ್ಲಕ್ಷತೆಯಿಂದ ಒಂದು ದವಡೆ ಹಲ್ಲಿನಲ್ಲಿ ರೂಟ್ ಕೆನಾಲ್ ಮಾಡುವ ಉಪಕರಣ ಮುರಿದಿತ್ತು ಅಂದರೆ ಸರಿಯಲ್ಲ.

ಸದರಿ ಉಪಕರಣವನ್ನು ತೆಗೆಯದೇ ಅದೇ ಹಲ್ಲಿನಲ್ಲಿ ಬಿಟ್ಟಿದ್ದರು ಅಂದರೆ ಸರಿಯಲ್ಲ. ದವಡೆ ಹಲ್ಲಿಗೆ ಆಳವಾಗಿ ರಂಧ್ರ ಕೊರೆದು ನೋವು ಬರುವಂತೆ ಮಾಡಿದ್ದರು ಅಂದರೆ ಸರಿಯಲ್ಲ. ಚಾಸಾ -1 ರವರು ಚಾಸಾ -4 ಮತ್ತು 5 ರವರೊಂದಿಗೆ ಆರೋಪಿಯ ಆಸ್ಪತ್ರೆಗೆ ಬಂದು ಕೇಳಿದಾಗ ಆತ ನುರಿತ ವೈದ್ಯರಲ್ಲಿ ತೋರಿಸಿಕೊಳ್ಳಿ ಅದಕ್ಕೆ ಸಂಬಂಧಿಸಿದ ವೆಚ್ಚ ಕೊಡುತ್ತೇನೆ ಎಂದು ತಿಳಿಸಿದ್ದ ಅಂದರೆ ಸರಿಯಲ್ಲ. ಚಾಸಾ -1 ರವರು ಧಾರವಾಡದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ನಂತರ ರೂ. 25,000/- ಗಳ ವೆಚ್ಚ ಆಗಿರುವುದಾಗಿ ತಿಳಿಸಿದಾಗ ಆರೋಪಿ ನೋವು ತನ್ನ ನಿರ್ಲಕ್ಷತನದಿಂದ ಆಗಿಲ್ಲ ಎಂದು ಬೇಜವಬ್ದಾರಿಯಿಂದ ನುಡಿದಿರುತ್ತಾರೆ ಅಂದರೆ ಸರಿಯಲ್ಲ. ಆದ್ದರಿಂದ ಚಾಸಾ -1 ರವರು ಆರೋಪಿ ವಿರುದ್ಧ ದೂರು ನೀಡಿದ್ದರು ಅಂದರೆ ಸರಿಯಲ್ಲ. ಈ ಬಗ್ಗೆ ನಾನು ದಿಃ 23-10-2016 ರಂದು ಪೋಲಿಸರಿಗೆ ಹೇಳಿಕೆ ನೀಡಿರುತ್ತೇನೆ ಅಂದರೆ ಸರಿಯಲ್ಲ. ಸಾಕ್ಷಿ ನೀಡಿಲ್ಲ ಎಂಬ ಹೇಳಿಕೆಯ ಭಾಗವನ್ನು ನಿಪಿಃ 8 ಎಂದು ಗುರುತಿಸಲಾಯಿತು.

ನನಗೆ ಪ್ರಕರಣದ ಬಗ್ಗೆ ಮಾಹಿತಿ ಇದ್ದರೂ ಸಹ ನಿಪಿಃ 8 ರಂತೆ ಹೇಳಿಕೆ ನೀಡಿದ್ದರೂ ಸಹ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಸಿ ಪಿ ವಾಯ್., ವಕೀಲರಿಂದಃ ಇಲ್ಲಾ**

ಮರುವಿಚಾರಣೆ ಇಲ್ಲ.

**(**ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)**

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು
ಹಾಗೂ ಜೆ.ಎಂ.ಎಫ್.ಸಿ., ಹೊಸಪೇಟೆ.